# ಕರ್ನಾಟಕ ಸರ್ಕಾರದ ನಡವಳಿಗಳು

ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ
ಸಂಖ್ಯೆ.......................
20 SEP 2022
ಕೇಂದ್ರ ಕಚೇರಿ
ಬೆಂಗಳೂರು-1

ವಿಷಯ: ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆಯುವ ಫಲಾಪೇಕ್ಷಿಗಳಿಗೆ ವಯೋಮಿತಿ ನಿಗದಿಪಡಿಸುವ ಬಗ್ಗೆ.

ಉಲ್ಲೇಖ: ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ರವರ ಪತ್ರ ಸಂಖ್ಯೆ:ಅಂಅನಿ/ಕೈ-ತ/ವಾ.ಕ್ರಿ/2022-23, ದಿ:18-08-2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ವ್ಯವಸ್ಥಾಕ ನಿರ್ದೇಶಕರು ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಇವರು 2022-23ನೇ ಸಾಲಿಗೆ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದ್ದು, ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ/ ಯುವತಿಯರ ಹಿತದೃಷ್ಠಿಯಿಂದ ಬ್ಯಾಂಕ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಹೊರತುಪಡಿಸಿ ನಿಗಮದ ವತಿಯಿಂದ ನೇರವಾಗಿ ಅನುಷ್ಠಾನಗೊಳಿಸುವ ಯೋಜನೆಗಳಿಗೆ ಹಾಗೂ ಕೃಷಿ ಮತ್ತು ಕೃಷಿ ಆಧಾರಿತ ಚಟುವಟಿಕೆಗಳಿಗೆ ಫಲಾನುಭವಿಗಳ ವಯೋಮಿತಿ ಕನಿಷ್ಠ 21 ವರ್ಷಗಳಿಂದ ಗರಿಷ್ಠ 60 ವರ್ಷಗಳವರೆಗೆ ಹೆಚ್ಚಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 252 ಎಸ್‌ಡಿಸಿ 2022,**
**ಬೆಂಗಳೂರು, ದಿನಾಂಕ:17.09.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ / ಯುವತಿಯರ ಹಿತದೃಷ್ಠಿಯಿಂದ ಬ್ಯಾಂಕ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಹೊರತುಪಡಿಸಿ ನಿಗಮದಿಂದ ನೇರವಾಗಿ ಅನುಷ್ಠಾನಗೊಳಿಸುವ ಯೋಜನೆಗಳಿಗೆ ಹಾಗೂ ಕೃಷಿ ಮತ್ತು ಕೃಷಿ ಆಧಾರಿತ ಚಟುವಟಿಕೆಗಳಿಗೆ ಫಲಾನುಭವಿಗಳ ವಯೋಮಿತಿಯನ್ನು ಸಡಿಲಗೊಳಿಸಿ ಕನಿಷ್ಠ 21 ವರ್ಷಗಳಿಂದ ಗರಿಷ್ಠ 60 ವರ್ಷಗಳವರೆಗೆ ಹೆಚ್ಚಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17-09-2022

(ವಿ.ಪ್ರಕಾಶ್)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

3. ವ್ಯವಸ್ಥಾಪಕ ನಿರ್ದೇಶಕರು, ಡಾ ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನೋಡಲ್ ಸಲಹೆಗಾರರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ,ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.